ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:1254(1402)
ಸದಸ್ಯರ ಹೆಸರು	:ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ)
ಉತ್ತರಿಸಬೇಕಾದ ಸಚಿವರು	:ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)

ಅ) ಜೈವಿಕ ಇಂಧನ ಬೆಳೆಗಳಾದ ಜತ್ರೋಪ, ಹೊಂಗೆ, ಬೇವು ಬೆಳೆಯನ್ನು ಬೆಳೆಯಲು ಸರ್ಕಾರ ಇತ್ತೀಚಿನ ದಿನಗಳಲ್ಲಿ ಮಾಧ್ಯಮಗಳ ಮೂಲಕ ಪ್ರಚಾರ ಮಾಡುತ್ತಿರುವುದು ನಿಜವೇ;

ಹೌದು..

ಆ) ಹಾಗಿದ್ದಲ್ಲಿ, ಈ ಬೆಳೆಗಳನ್ನು ಸಂಸ್ಕರಿಸಲು ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಆಶ್ರಯದಲ್ಲಿ ಹಾಸನದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಜೈವಿಕ ಇಂಧನ ಪಾರ್ಕ್‌ನಲ್ಲಿ ಜೈವಿಕ ಇಂಧನ ಬೆಳೆಗಳ ಉತ್ಪನ್ನವನ್ನು ಸಂಸ್ಕರಿಸುವ ಘಟಕವನ್ನು ಸ್ಥಾಪಿಸುವ ಕಾರ್ಯಕ್ರಮವಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1255(1403)
ಮಾನ್ಯ ಸದಸ್ಯರ ಹೆಸರು	:	ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ)
ಉತ್ತರಿಸಬೇಕಾದ ಸಚಿವರು	:	ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)

ಅ) ಚಾಮರಾಜನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಅರಿಶಿನ ಬೆಳೆಗೆ ಮಾರುಕಟ್ಟೆ ಮತ್ತು ಸಂಸ್ಕರಣ ಘಟಕ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ;

ಚಾಮರಾಜನಗರ ಜಿಲ್ಲೆಯಲ್ಲಿ ಚಾಮರಾಜನಗರ, ಗುಂಡ್ಲುಪೇಟೆ ಹಾಗೂ ಕೊಳ್ಳೇಗಾಲದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳನ್ನು ಸ್ಥಾಪಿಸಿದ್ದು, ಅವುಗಳ ವ್ಯಾಪ್ತಿಯಲ್ಲಿ ಅರಿಶಿನ ಉತ್ಪನ್ನವನ್ನು ಮಾರಾಟ ನಿಯಂತ್ರಣಕ್ಕಾಗಿ ಅಧಿಸೂಚನೆಗೊಳಿಸಲಾಗಿದೆ.

ಸಂಸ್ಕರಣ ಘಟಕ ಸ್ಥಾಪಿಸುವ ವಿಷಯವು ಈಗ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.